# ಮೈಸೂರು ವಿಶ್ವವಿದ್ಯಾನಿಲಯ

Estd-1916
**(Re-accredited by NAAC with CGPA 3.47 on four point scale with A grade)**

ಸಂಖ್ಯೆ: ಪ.ವಿ.8.4/ಯು.ಜಿ/47/2012-13

ಕುಲಸಚಿವ (ಪರೀಕ್ಷಾಂಗ) ರವರ ಕಛೇರಿ,
ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ ಮೈಸೂರು-570 005,
ದಿನಾಂಕ: 18-08-2021

## ಸುತ್ತೋಲೆ

**ವಿಷಯ**: ಪರೀಕ್ಷಾ ಶುಲ್ಕ ವಿನಾಯಿತಿ/ಮರುಭರಿಕೆ ಕುರಿತು.

---

1. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಸುತ್ತೋಲೆ ಸಂಖ್ಯೆ:ವಿಫ/1/9/2013-14 ದಿನಾಂಕ:25-09-2013ರ ಪ್ರಕಾರ 2013-14ನೇ ಶೈಕ್ಷಣಿಕ ಸಾಲಿನಿಂದ ಪದವಿ ಕೋರ್ಸ್‌ಗಳಲ್ಲಿ ಪ್ರವೇಶಾತಿ ಪಡೆದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ ರೂ.2.5 ಲಕ್ಷದೊಳಗಿರುವ ವಿದ್ಯಾರ್ಥಿಗಳಿಂದ ಪ್ರವೇಶಾತಿ ಶುಲ್ಕ, ಬೋಧನಾ ಶುಲ್ಕ, ಪ್ರಮಾಣ ಪತ್ರ ಶುಲ್ಕ, ಅಂಕಪಟ್ಟಿ ಶುಲ್ಕ ಮತ್ತು ಅಂತಿಮ ಪದವಿ ಪ್ರಮಾಣ ಪತ್ರದ ಶುಲ್ಕಗಳನ್ನು ಕಟ್ಟಿಸಿಕೊಳ್ಳಬಾರದೆಂದು ಸರ್ಕಾರದ ಆದೇಶವಿರುತ್ತದೆ. ಇದರಂತೆ ಕ್ರಮತೆಗೆದುಕೊಳ್ಳುವುದು.

2. ಪ್ರವರ್ಗ-1 ಮತ್ತು ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ಪಡೆಯಲು ಅರ್ಹರಾದ ಇತರೆ ವರ್ಗಗಳಿಗೆ (ಸಾಮಾನ್ಯ ವರ್ಗದವರನ್ನು ಒಳಗೊಂಡಂತೆ) ಸೇರಿದ ವಿದ್ಯಾರ್ಥಿಗಳಿಗೆ ಅವರ ಪೋಷಕರ ವಾರ್ಷಿಕ ವರಮಾನದ ಆಧಾರದ ಮೇಲೆ ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಆದರೂ, ಅಂತಹ ವಿದ್ಯಾರ್ಥಿಗಳು ನಿಗದಿಪಡಿಸಿದಂತೆ, ಅಂಕಪಟ್ಟಿ ಶುಲ್ಕ ರೂ.320/-ಗಳನ್ನು ಪಾವತಿ ಮಾಡಬೇಕು.

3. ಸರ್ಕಾರದ ಅಧೀನ ಕಾರ್ಯದರ್ಶಿ-1, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು, ಇವರ ತಿದ್ದುಪಡಿ ಮತ್ತು ಸೇರ್ಪಡೆ ಆದೇಶ ಸಂಖ್ಯೆ:ಹಿಂವಕ 589 ಬಿಎಂಎಸ್ 2013, ದಿನಾಂಕ:06.08.2014ರ ಸರ್ಕಾರಿ ಆದೇಶದನ್ವಯ ಮತ್ತು ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಸುತ್ತೋಲೆ ಸಂಖ್ಯೆ:ಜಿಎಲ್.3/170/2014-15 ದಿನಾಂಕ 13.08.2014 ರಂತೆ ಸರ್ಕಾರಿ ಆದೇಶದನ್ವಯ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ನಿಗದಿತ ಆದಾಯದ ಮಿತಿಯೊಳಗಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರವನ್ನು ತಾವು ಪ್ರವೇಶ ಪಡೆಯುವ ಕಾಲೇಜು/ಶಿಕ್ಷಣ ಸಂಸ್ಥೆಗಳಿಗೆ ಪ್ರವೇಶ ಸಮಯದಲ್ಲಿ ಸಲ್ಲಿಸಿದ್ದಲ್ಲಿ, ಅಂತಹ ಕಾಲೇಜು/ಶಿಕ್ಷಣ ಸಂಸ್ಥೆಗಳು ಸರ್ಕಾರವು ಕಾಲೇಜುಗಳಿಗೆ ನಿಗದಿಪಡಿಸಿದ ಬೋಧನಾ ಶುಲ್ಕ, ಪರೀಕ್ಷಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಮತ್ತು ಗ್ರಂಥಾಲಯ ಶುಲ್ಕಗಳನ್ನು ವಸೂಲಿ ಮಾಡದೇ ವಿನಾಯಿತಿ ನೀಡಿ ಪ್ರವೇಶಾತಿ ನೀಡುವುದು.

ಆದಾಗ್ಯೂ, ಮೇಲ್ಕಾಣಿಸಿದಂತೆ ವಿನಾಯಿತಿ ನೀಡಿರುವ ಶುಲ್ಕಗಳನ್ನು ಮರುಪಾವತಿಸುವಂತೆ ಸಂಬಂಧಪಟ್ಟ ಕಾಲೇಜು/ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳ ಕ್ರೋಢೀಕೃತ ಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಶುಲ್ಕ ವಿನಾಯಿತಿ ಮಂಜೂರಾತಿ ಪ್ರಾಧಿಕಾರಿಗಳಿಗೆ ಸಲ್ಲಿಸುವುದು. ಸರ್ಕಾರಿ ಆದೇಶಾನುಸಾರ ಶುಲ್ಕ ವಿನಾಯಿತಿ ನೀಡಿರುವ ವಿದ್ಯಾರ್ಥಿಗಳ ಮರುಭರಿಕೆ ಶುಲ್ಕಗಳನ್ನು ಸಂಬಂಧಿಸಿದ ಇಲಾಖೆಯಿಂದ ನಿಗದಿತ ಅವಧಿಯೊಳಗೆ ಮರುಭರಿಕೆ ಮಾಡಿಕೊಂಡು ವಿಶ್ವವಿದ್ಯಾನಿಲಯಕ್ಕೆ ಜಮಾ ಮಾಡುವ ನಿಟ್ಟಿನಲ್ಲಿ ಸೂಕ್ತ ಕ್ರಮ ಜರುಗಿಸುವುದು. ಈ ಕಾರ್ಯವು ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರು/ಮುಖ್ಯಸ್ಥರ ಹೊಣೆಗಾರಿಕೆಯಾಗಿರುತ್ತದೆ.

ಮುಂದುವರೆದು, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳ ಶಿಷ್ಯವೇತನ ಹಾಗೂ ಇನ್ನಿತರೆ ಪ್ರೋತ್ಸಾಹ ಧನ ನೇರವಾಗಿ ವಿದ್ಯಾರ್ಥಿಗಳ ಖಾತೆಗೆ ಜಮೆಯಾಗುತ್ತಿರುವುದರಿಂದ, ವಿಶ್ವವಿದ್ಯಾನಿಲಯಕ್ಕೆ ಪಾವತಿಸಬೇಕಾದ ಶುಲ್ಕಗಳನ್ನು ಭರಿಸಲು ಸಾಧ್ಯವಾಗುತ್ತಿಲ್ಲ ಎಂಬ ಮನವಿಗಳು ಹಲವಾರು ಕಾಲೇಜು/ಶಿಕ್ಷಣ ಸಂಸ್ಥೆಗಳ

ಮುಖ್ಯಸ್ಥರುಗಳಿಂದ ಕೇಳಿ ಬರುತ್ತಿವೆ. ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯಕ್ಕೆ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡಬಹುದಾಗಿದೆ.

ಈ ಎಲ್ಲಾ ಅಂಶವನ್ನು ಸಂಬಂಧಪಟ್ಟ ವಿದ್ಯಾರ್ಥಿಗಳ ಗಮನಕ್ಕೆ ತರತಕ್ಕದ್ದು.

19/8/21

ಕುಲಸಚಿವ (ಪರೀಕ್ಷಾಂಗ)

ಇವರಿಗೆ,

1 ಸಂಬಂಧಪಟ್ಟ ಎಲ್ಲಾ ಬಿ.ಎಡ್., ಕಾಲೇಜಿನ ಪ್ರಾಂಶುಪಾಲರುಗಳು/ಮುಖ್ಯಸ್ಥರುಗಳು.
2 ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ (ಪರೀಕ್ಷಾಂಗ)/ಹಣಕಾಸು ಅಧಿಕಾರಿ ರವರ ಆಪ್ತ-ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3 ಸಂಬಂಧಿಸಿದ ಕಡತಕ್ಕೆ.